# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1471 (1703)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಾವಿರಾರು ಹುದ್ದೆಗಳು ಖಾಲಿ ಇರುವ ಬಗ್ಗೆ

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಾವಿರಾರು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೇ ತೆಗೆದುಕೊಂಡ ಕ್ರಮಗಳೇನು ;

ಆ) ಇಲಾಖೆಯಲ್ಲಿ ಯಾವ ಯಾವ ಹಂತದ ಹುದ್ದೆಗಳು ಖಾಲಿ ಇವೆ ; (ವಿವರ ನೀಡುವುದು) ಗ್ರಾಮೀಣ ಉದ್ಯೋಗ ವಿಭಾಗದಲ್ಲಿ ಎಷ್ಟು ಹುದ್ದೆಗಳು ಮಂಜೂರಾಗಿವೆ ಭರ್ತಿ ಮಾಡಿದ ಹುದ್ದೆಗಳೆಷ್ಟು;

(ಇ) ಜಿಲ್ಲಾ ಪಂಚಾಯತ್ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೇ ಜಿಲ್ಲಾವಾರು ಯಾವ ಯಾವ ಏಜೆನ್ಸಿಯಿಂದ ಎಷ್ಟು ಗುತ್ತಿಗೆ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಈ) ಇಲಾಖೆ ಅಧಿಕಾರಿಗಳ ಕೊರತೆಯಿಂದಾಗಿ ಅನೇಕ ಯೋಜನೆಗಳು ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಇದರಿಂದಾಗಿ ಅನುದಾನವನ್ನು ವಾಪಸ್ಸು ಕಳುಹಿಸುವ ಸಾಧ್ಯತೆಗಳಿವೆಯೇ ; (ವಿವರ ನೀಡುವುದು)

(ಊ) ಎಷ್ಟು ದಿನದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದು ?